ಕುವೆಂಪು ವಿಶ್ವವಿದ್ಯಾಲಯ

Accredited by NAAC with "A" Grade

73rd All India Rank in NIRF

ಸಂಖ್ಯೆ : ಕುವಿ/ಪವಿ/ಡಿಎಸ್-1/D246 /2021-22

ರಿಜಿಸ್ಟ್ರಾರ್ (ಮೌಲ್ಯಮಾಪನ) ರವರ ಕಛೇರಿ
ಜ್ಞಾನಸಹ್ಯಾದ್ರಿ ಶಂಕರಘಟ್ಟ - 577451
ಶಿವಮೊಗ್ಗ ಜಿಲ್ಲೆ
ದಿನಾಂಕ: 30-05-2021

## ಅಧಿಸೂಚನೆ

ವಿಷಯ : 2019-20ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ದೂರಶಿಕ್ಷಣದ ಸ್ನಾತಕ ಪದವಿಯ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಹಾಗೂ ಸ್ನಾತಕೋತ್ತರ ಪದವಿಯ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ (ಪ್ರಥಮ ಮತ್ತು ದ್ವಿತೀಯ ಆವೃತ್ತಿ) MHRD-UGC ಹಾಗೂ ರಾಜ್ಯ ಸರ್ಕಾರಗಳ ನಿರ್ದೇಶನದ ಅನ್ವಯ "ತೆರೆದ ಪುಸ್ತಕ ಪರೀಕ್ಷೆ" (Open Book Exam) ನಡೆಸುವ ಕುರಿತು.

ಉಲ್ಲೇಖ :
1) ಈ ಕಛೇರಿಯ ಅಧಿಸೂಚನೆ ಸಂಖ್ಯೆ: ಕುವಿ/ಪವಿ/ಡಿಎಸ್-01/ಡಿ6078/2020-21, ದಿನಾಂಕ:29-03-2021
2) ಈ ಕಛೇರಿಯ ಅಧಿಸೂಚನೆ ಸಂಖ್ಯೆ: ಕುವಿ/ಪವಿ/ಡಿಎಸ್-01/41/ಡಿ86/2020-21, ದಿನಾಂಕ:17-04-2021
3) ದೂರಶಿಕ್ಷಣದ ಅಧ್ಯಯನ ಕೇಂದ್ರಗಳ ಸಂಯೋಜನಾಧಿಕಾರಿಗಳ ಸಭೆಯ ನಿರ್ಣಯ ದಿನಾಂಕ:29-05-2021
4) ವಿಶ್ವವಿದ್ಯಾಲಯದ ಡೀನರುಗಳ ಸಭೆಯ ನಿರ್ಣಯ ದಿನಾಂಕ:29-05-2021
5) ಮಾನ್ಯ ಕುಲಪತಿಗಳ ಟಿಪ್ಪಣಿ ಸಂಖ್ಯೆ: ಕುವಿ/ವಿಸಿ/ಪಿ.ಎಸ್/2021-22/26, ದಿನಾಂಕ: 29-05-2021
6) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:30-05-2021

******

ವಿಶ್ವವಿದ್ಯಾಲಯದ ದೂರಶಿಕ್ಷಣದ 2019-20ನೇ ಶೈಕ್ಷಣಿಕ ಸಾಲಿನ ಸ್ನಾತಕ/ಸ್ನಾತಕೋತ್ತರ/ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ದಿನಾಂಕ:19-04-2021 ರಿಂದ 15-05-2021ರವರೆಗೆ ನಡೆಸಲು ಅಧಿಸೂಚನೆಯನ್ನು ಉಲ್ಲೇಖ (1)ರಲ್ಲಿ ಹೊರಡಿಸಲಾಗಿತ್ತು. ನಂತರ ಕೋವಿಡ್-19 ಸಾಂಕ್ರಾಮಿಕ ರೋಗದ ಎರಡನೇ ಅಲೆಯ ಪ್ರಖರತೆಯು ಹೆಚ್ಚಾದ ಕಾರಣ ಉಲ್ಲೇಖ (2)ರ ಅಧಿಸೂಚನೆಯಲ್ಲಿ ಈ ಪರೀಕ್ಷೆಗಳನ್ನು ಮುಂದೂಡಲಾಗಿರುತ್ತದೆ. ಕೋವಿಡ್-19 ಸಾಂಕ್ರಾಮಿಕ ರೋಗದ ಎರಡನೇ ಅಲೆಯ ಪ್ರಖರತೆಯ ಹಿನ್ನೆಲೆಯಲ್ಲಿ "ತೆರೆದ ಪುಸ್ತಕ ಪರೀಕ್ಷೆ" (Open Book Exam) ನಡೆಸುವ ಸಾಧಕ/ಬಾಧಕಗಳನ್ನು ಚರ್ಚಿಸಲು ಕೆಲವು ಅಧ್ಯಯನ ಕೇಂದ್ರಗಳ ಸಂಯೋಜನಾಧಿಕಾರಿಗಳ ಸಭೆಯನ್ನು ದಿನಾಂಕ:07-05-2021ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಗಿರುತ್ತದೆ. ನಂತರ ಉಲ್ಲೇಖ (4)ರಲ್ಲಿ ಈ ವಿಷಯದ ಕುರಿತು ಸುದೀರ್ಘವಾಗಿ ಚರ್ಚಿಸಲು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ವಿವಿಧ ನಿಕಾಯಗಳ ಡೀನರು, IGNOU ಪ್ರತಿನಿಧಿಗಳು ಹಾಗೂ ಕೆಲವು ಸಿಂಡಿಕೇಟ್ ಮತ್ತು ಶೈಕ್ಷಣಿಕ ಮಂಡಳಿಯ ಸದಸ್ಯರುಗಳ ಸಭೆಯಲ್ಲಿ ಚರ್ಚಿಸಲಾಗಿರುತ್ತದೆ. ಈ ಸಭೆಯ ನಿರ್ಣಯದಂತೆ "ತೆರೆದ ಪುಸ್ತಕ ಪರೀಕ್ಷೆ" (Open Book Exam) ನಡೆಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ಉಲ್ಲೇಖ (5)ರಲ್ಲಿ ಮಾನ್ಯ ಕುಲಪತಿಗಳು ನಿರ್ದೇಶನ ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಕೆಳಕಂಡಂತೆ 2019-20ನೇ ಸಾಲಿನಲ್ಲಿ ದೂರಶಿಕ್ಷಣ ಕೋರ್ಸುಗಳಿಗೆ ಪ್ರವೇಶ ಪಡೆದ ಸ್ನಾತಕ ಪದವಿಯ ಪ್ರಥಮ ಮತ್ತು ದ್ವಿತೀಯ ವರ್ಷ ಹಾಗೂ ಸ್ನಾತಕೋತ್ತರ ಪದವಿಯ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ "ತೆರೆದ ಪುಸ್ತಕ ಪರೀಕ್ಷೆ" (Open Book Exam) ನಡೆಸಲು ಅಧಿಸೂಚಿಸಲಾಗಿದೆ.

1. "ತೆರೆದ ಪುಸ್ತಕ ಪರೀಕ್ಷೆ" (Open Book Exam) ಯು ವಿದ್ಯಾರ್ಥಿಗಳು ನಿಗದಿತ ಕಾಲಾವಧಿಯಲ್ಲಿ ಅವರು ಇರುವ ಸ್ಥಳಗಳಲ್ಲಿ ಪರೀಕ್ಷೆಗಳನ್ನು ಬರೆಯುವ ಸ್ವರೂಪವನ್ನು ಹೊಂದಿರುತ್ತದೆ ಹಾಗೂ ನಿಗದಿತ ಕಾಲಾವಧಿಯೊಳಗೆ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನಕ್ಕಾಗಿ ಪರೀಕ್ಷಾ ವಿಭಾಗಕ್ಕೆ ಸಲ್ಲಿಕೆಗೊಳ್ಳುವ ವ್ಯಾಪ್ತಿಯನ್ನು ಹೊಂದಿರುತ್ತದೆ.

ಪು.ತಿ.ನೊ.

2. "ತೆರೆದ ಪುಸ್ತಕ ಪರೀಕ್ಷೆ" (Open Book Exam) ಯು ವಿಶೇಷ ಸಂದರ್ಭವೆಂದು ಪರಿಗಣನೆಗೊಳ್ಳುತ್ತದೆ ಹಾಗೂ ಒಂದು ಬಾರಿಯ ಅವಕಾಶವಾಗಿರುತ್ತದೆ. ಇದರಲ್ಲಿ ಮರು / ಸವಾಲಿನ ಮೌಲ್ಯಮಾಪನಕ್ಕೆ ಹಾಗೂ ಉತ್ತರ ಪತ್ರಿಕೆಯ ಛಾಯಪ್ರತಿ ಪಡೆಯಲು ಅವಕಾಶವಿರುವುದಿಲ್ಲ. 2019-20ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ಆವೃತ್ತಿ ವಿದ್ಯಾರ್ಥಿಗಳಿಗೆ ಮಾತ್ರ ಈ ಪರೀಕ್ಷಾ ವಿಧಾನ ಅನ್ವಯವಾಗುತ್ತದೆ. ಸದರಿ ಪರೀಕ್ಷೆಗೆ ಗೈರುಹಾಜರಾದಲ್ಲಿ ಅಥವಾ ಅನುತ್ತೀರ್ಣರಾದಲ್ಲಿ ಅಂತಹ ವಿದ್ಯಾರ್ಥಿಗಳು ಮುಂದಿನ ಶೈಕ್ಷಣಿಕ ಸಾಲಿನಲ್ಲಿ ವಿಶ್ವವಿದ್ಯಾಲಯವು ನಿಯಮಾನುಸಾರ ನಡೆಸುವ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.
3. ಈಗಾಗಲೇ ಪ್ರವೇಶಾತಿ ಅನುಮೋದನೆಗೊಂಡಿರುವ, ನಿಗದಿತ ಸಮಯದೊಳಗೆ ವಿಶ್ವವಿದ್ಯಾಲಯಕ್ಕೆ ಪರೀಕ್ಷಾ ಶುಲ್ಕವನ್ನು ಪಾವತಿಸಿರುವ ಹಾಗೂ ನೋಂದಣಿ ಸಂಖ್ಯೆ ನೀಡಲಾಗಿರುವ ವಿದ್ಯಾರ್ಥಿಗಳು ಮಾತ್ರ ಪರೀಕ್ಷೆಯನ್ನು ಬರೆಯಲು ಅವಕಾಶವಿರುತ್ತದೆ.
4. ಈ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಸಂಬಂಧಿಸಿದ ಅಧ್ಯಯನ ಕೇಂದ್ರದ ಸಂಯೋಜನಾಧಿಕಾರಿಗಳು ವಿಶ್ವವಿದ್ಯಾಲಯದಿಂದ ದಿನಾಂಕ:10-06-2021ರಂದು ಖುದ್ದಾಗಿ ಪಡೆದು, ಸಂಬಂಧಿಸಿದ ಅರ್ಹ ವಿದ್ಯಾರ್ಥಿಗಳಿಗೆ ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ವಿತರಿಸಿ, ಉತ್ತರಿಸಿದ ಉತ್ತರ ಪತ್ರಿಕೆಗಳನ್ನು ಹತ್ತು ದಿನದೊಳಗಾಗಿ ಅಂದರೆ ದಿನಾಂಕ:14-06-2021 ರಿಂದ 23-06-2021 ರ ಅವಧಿಯೊಳಗಾಗಿ ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗಕ್ಕೆ Speed Post ಮುಖಾಂತರ ಅಥವಾ ಖುದ್ದಾಗಿ ಮೊಹರು ಮಾಡಿದ ಲಕೋಟೆಯಲ್ಲಿ ತಲುಪಿಸಬೇಕು. ಕಾಲಾವಧಿ ಮುಗಿದ ನಂತರ ಬಂದ ಉತ್ತರ ಪತ್ರಿಕೆಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ ಹಾಗೂ ಮೌಲ್ಯಮಾಪನಕ್ಕೆ ಪರಿಗಣಿಸಲಾಗುವುದಿಲ್ಲ.
5. ಈ ಪರೀಕ್ಷೆಗಳನ್ನು ನಡೆಸಲು ಸರ್ಕಾರ / ಯು.ಜಿ.ಸಿ. ನಿಗಧಿ ಪಡಿಸಿರುವ ಕೋವಿಡ್-19 ಸಾಂಕ್ರಾಮಿಕ ರೋಗದ ಮಾರ್ಗಸೂಚಿಯನ್ನು (SOP) ಕಡ್ಡಾಯವಾಗಿ ಪಾಲಿಸುವುದು.

ಕುಲಸಚಿವರು (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ - 577 451.

ಗೆ,

1. ನಿರ್ದೇಶಕರು, ದೂರಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
2. ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಎಲ್ಲಾ ದೂರಶಿಕ್ಷಣ ಕೇಂದ್ರಗಳ ಸಂಯೋಜನಾಧಿಕಾರಿಗಳಿಗೆ

ಪ್ರತಿಗಳು:

1. ಆಪ್ತ ಕಾರ್ಯಾಲಯ ಮಾನ್ಯ ಕುಲಪತಿಗಳು/ಕುಲಸಚಿವರು/ಕುಲಸಚಿವರು (ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
2. ಉಪಕುಲಸಚಿವರು/ಸಹಾಯಕ ಕುಲಸಚಿವರು/ಶಾಖಾಧಿಕಾರಿಗಳು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
3. ತಾಂತ್ರಿಕ ಸಹಾಯಕರು, ಕಂಪ್ಯೂಟರ್ (ಪರೀಕ್ಷಾಂಗ) ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
4. ಸಂಯೋಜಕರು, ಹೊರಗುತ್ತಿಗೆ ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾಲಯ ಕೇಂದ್ರಿಯ ಗಣಕಕಾರ್ಯ ಸೌಲಭ್ಯ ಮತ್ತು ಮಾಹಿತಿ ತಂತ್ರಜ್ಞಾನ ಘಟಕ (ಯು.ಸಿ.ಸಿ.ಎಫ್.), ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
6. ಕಛೇರಿ ಪ್ರತಿ.